ವಿಧಾನ ಸಭಾ ಕ್ಷೇತ್ರಕ್ಕೆ ೫೦ ಕಿ. ಮೀ. ಮೀರದಂತೆ, ಮೇಲ್ದರ್ಜೆಗೆ ಏರಿಸಿ ಲೋಕೋಪಯೋಗಿ ಇಲಾಖೆಗೆ ನಿರ್ವಹಣೆ ಮತ್ತು ಅಭಿವೃದ್ಧಿಗಾಗಿ ತೆಗೆದುಕೊಳ್ಳಲಾಗುವುದು. ರಸ್ತೆಗಳ ವಿವರಣೆಗಳನ್ನು ಶೀಘ್ರವಾಗಿ ತೀರ್ಮಾನಿಸಲಾಗುವುದು.

೫) ಗಮನಕ್ಕೆ ಬಂದಿದೆ.

ಈ) ಈ ರಸ್ತೆಯು ಜಿಲ್ಲಾ ಪರಿಷತ್ತಿನ ವ್ಯಾಪ್ತಿಯಲ್ಲಿದ್ದು ಲಭ್ಯವಿರುವ ಅನುದಾನದಲ್ಲಿ ಈ ರಸ್ತೆಯನ್ನು ಸಾಧ್ಯವಿದ್ದ ಮಟ್ಟಿಗೆ ಸುಸ್ಥಿತಿಯಲ್ಲಿಡಲಾಗುತ್ತಿದೆ.

ಉ) ಶೀಘ್ರದಲ್ಲಿ ಈ ರಸ್ತೆಯನ್ನು ಮುಖ್ಯ ಜಿಲ್ಲಾ ರಸ್ತೆಯನ್ನಾಗಿ ಮೇಲ್ದರ್ಜೆಗೆ ಏರಿಸಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ತೆಗೆದುಕೊಳ್ಳುವ ವಿಷಯವನ್ನು ತೀರ್ಮಾನಿಸಲಾಗುವುದು.

ವರದಾ ನದಿಯ ಮೇಲೆ ಹಾಯ್ದು ಹೋಗುವ ವಾಹನಗಳಿಂದ ಸುಂಕ ವಸೂಲಿ

೧೪೦೩ (೧೮೮೭) ಶ್ರೀ ಪಿ. ಸಿ. ಸಿದ್ದನಗೌಡರ್ (ಕಲಘಟಗಿ):- ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ವರದಾ ನದಿಯ ಮೇಲೆ ಹಾಯ್ದು ಹೋಗುವ ವಾಹನಗಳಿಂದ ಸುಂಕ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಸರ್ಕಾರಕ್ಕೆ ಇದರಿಂದ ಪ್ರಾರಂಭದಿಂದ ಇಲ್ಲಿಯವರೆಗೆ ಬಂದಿರುವ ಹಣವೆಷ್ಟು?

ಇ) ಈ ನದಿಯ ಮೇಲೆ ಕಟ್ಟಿರುವ ಸೇತುವೆಗೆ ಸರ್ಕಾರ ಖರ್ಚು ಮಾಡಿರುವ ಹಣವೆಷ್ಟು?

ಈ) ಈ ಸುಂಕ ವಸೂಲಾತಿಯನ್ನು ನಿಲ್ಲಿಸುವ ಬಗ್ಗೆ ಸರ್ಕಾರ ಪರಿಶೀಲಿಸುತ್ತದೆಯೇ?

ಉ) ಈ ಸುಂಕ ವಸೂಲಾತಿಯಲ್ಲಿ ಅವ್ಯವಹಾರಗಳು ನಡೆದ ಬಗ್ಗೆ ಸರ್ಕಾರಕ್ಕೆ ಮಾಹಿತಿಗಳೇನಾದರೂ ಬಂದಿದೆಯೇ?

ಊ) ಎಷ್ಟು ಬಾರಿ ಅಧಿಕಾರಿಗಳು ಈ ಬಗ್ಗೆ ತನಿಖೆ ನಡೆಸಿದ್ದಾರೆ?

ಶ್ರೀ ಜಿ. ಹೆಚ್. ಅಶ್ವತ್ಥ್ ರೆಡ್ಡಿ (ಲೋಕೋಪಯೋಗಿ ಸಚಿವರು):-

ಅ) ಬಂದಿದೆ.

ಆ) ಈ ಸೇತುವೆಯ ಮೇಲೆ ಈವರೆವಿಗೆ ವಸೂಲಾತಿಯಾಗಿರುವ ಸುಂಕದ ಮೌಲ್ಯವು ೧.೨೪ ಕೋಟಿ ರೂ. ಗಳು.

ಇ) ಈ ನದಿಯ ಮೇಲೆ ಕಟ್ಟಿರುವ ಸೇತುವೆಗೆ ಹಾಗೂ ಕೂಡು ರಸ್ತೆಗಳಿಗೆ ಒಟ್ಟು ೨,೧೪,೫೮,೬೬೪-೦೦ ರೂ. ಗಳನ್ನು ಖರ್ಚು ಮಾಡಲಾಗಿದೆ.

ಈ) ರಾಷ್ಟ್ರೀಯ ಹೆದ್ದಾರಿ ಕಾಯಿದೆಯ ಪ್ರಕಾರ ಈ ರೀತಿ ಸುಂಕ ವಸೂಲಿ ಮಾಡಲಾಗುತ್ತಿದೆ. ಸೇತುವೆಗೆ ಹಾಗೂ ಕೂಡು ರಸ್ತೆಗಳಿಗೆ ವೆಚ್ಚಮಾಡಿರುವ ಹಣ ಅದರ ಮೇಲಿನ ಬಡ್ಡಿ ಹಾಗೂ ನಿರ್ವಹಣಾ ವೆಚ್ಚ ಇವೆಲ್ಲವೂ ವಸೂಲಾಗುವವರೆಗೂ ಸುಂಕ ವಸೂಲಾತಿ ಮಾಡಿ ನಂತರ ನಿಲ್ಲಿಸಲಾಗುವುದು.

ಉ) ಬಂದಿಲ್ಲ. ಸುಂಕ ವಸೂಲಾತಿಯನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದ ಮೇಲೆ ನೀಡಲಾಗಿದೆ.

ಊ) ಅವ್ಯವಹಾರಗಳಾವುವೂ ಇಲ್ಲದಿರುವುದರಿಂದ ತನಿಖೆ ನಡೆಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ.

ಹುಬ್ಬಳ್ಳಿ ಪ್ರವಾಸಿ ಮಂದಿರ ಹಾಗೂ ಸರ್ಕ್ಯೂಟ್ ಹೌಸ್ ಬಗ್ಗೆ

೧೪೦೪ (೧೪೬೬) ಶ್ರೀ ಪಿ. ಸಿ. ಸಿದ್ದನಗೌಡರ (ಕಲಘಟಗಿ):- ಮಾನ್ಯ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಹುಬ್ಬಳ್ಳಿ ಪ್ರವಾಸಿ ಮಂದಿರ ಹಾಗೂ ಸರ್ಕ್ಯೂಟ್ ಹೌಸ್‌ನಲ್ಲಿರುವ ಕೊಠಡಿಗಳ ಸಂಖ್ಯೆ ಎಷ್ಟು?

ಆ) ಮುಖ್ಯ ಮಂತ್ರಿಗಳು ಹಾಗೂ ಮಂತ್ರಿಗಳು ಹುಬ್ಬಳ್ಳಿಗೆ ಬಂದಾಗ ಕೊಠಡಿಗಳು ಸಿಗದೆ ಧಾರವಾಡಕ್ಕೆ ಹೋಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ?

ಇ) ಹಾಗಿದ್ದಲ್ಲಿ ಹುಬ್ಬಳ್ಳಿಯ ಪ್ರವಾಸಿ ಮಂದಿರ ಹಾಗೂ ಸರ್ಕ್ಯೂಟ್ ಹೌಸ್‌ಗಳಲ್ಲಿ ಈಗಿರುವ ಕೊಠಡಿಗಳ ಸಂಖ್ಯೆಯನ್ನು ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಜಿ. ಪರಮೇಶ್ವರ ನಾಯ್ಕ (ಲೋಕೋಪಯೋಗಿ ಮಂತ್ರಿಗಳು):-

ಅ) ಕೊಠಡಿಗಳ ಒಟ್ಟು ಸಂಖ್ಯೆ ೨೨.

೧) ಪ್ರವಾಸಿ ಮಂದಿರದಲ್ಲಿ ೮ ಕೋಣೆಗಳು

೨) ಸರ್ಕ್ಯೂಟ್‌ಹೌಸ್‌ನಲ್ಲಿ ೯ ಕೋಣೆಗಳು

೩) ನಿರೀಕ್ಷಣಾ ಮಂದಿರದಲ್ಲಿ ೫ ಕೋಣೆಗಳು

ಒಟ್ಟು ೨೨

ಆ) ಹೌದು. ಕೆಲವೇ ಸಂದರ್ಭದಲ್ಲಿ ಮಾತ್ರ ಕೊಠಡಿಗಳು ಲಭ್ಯವಿಲ್ಲದ ಕಾರಣ ಧಾರವಾಡಕ್ಕೆ ಹೋಗಿರುವುದು ಉಂಟು.

ಇ) ಹುಬ್ಬಳ್ಳಿ ಪ್ರವಾಸಿ ಮಂದಿರದಲ್ಲಿ ೨.೦೦ ಲಕ್ಷ ರೂ. ಗಳ ಅಂದಾಜಿನಲ್ಲಿ ಹೆಚ್ಚು ಕೊಠಡಿಗಳನ್ನು ನಿರ್ಮಿಸಲು ಹಾಗೂ ಹುಬ್ಬಳ್ಳಿ-ಧಾರವಾಡ ನಗರಗಳ ಮಧ್ಯೆ ರಾಯಾಪೂರದಲ್ಲಿ ೯ ಸಾಧಾರಣ ಕೊಠಡಿಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಗುಲ್ಬರ್ಗ ಜಿಲ್ಲೆಯ ಸೇಡಂ ತಾಲ್ಲೂಕಿನ ರಸ್ತೆ ಕಾಮಗಾರಿ ಕೆಲಸ

೧೪೦೫ (೧೪೬೭) ಶ್ರೀ ಬಸವಂತರೆಡ್ಡಿ ಪೋತಕಪಲ್ಲಿ (ಸೇಡಂ):- ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ತಾಲ್ಲೂಕಿನ ಮಲಖೇಡದಿಂದ ಅಡಕಿ ಹುದಾವರೆಗೆ ಕಾರ್ಯ ನಿರ್ವಹಿಸುತ್ತಿದ್ದ ಗುತ್ತಿಗೆದಾರರು ಕೆಲಸವನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?